# ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 412 (470) |
| ಸದಸ್ಯರ ಹೆಸರು | : | ಶ್ರೀ ರಮೇಶ್ ಬಾಬು (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 30.01.2026 |
| ಉತ್ತರಿಸುವ ಸಚಿವರು | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಡಿಯಲ್ಲಿ ಒಟ್ಟು ಎಷ್ಟು ಪ್ರಾಧಿಕಾರಗಳು ಕಾರ್ಯನಿರ್ವಹಿಸುತ್ತಿವೆ; ಇವುಗಳಿಗೆ ಕಳೆದ 3 ವರ್ಷಗಳಲ್ಲಿ ರಾಜ್ಯ ಸರ್ಕಾರ ನೀಡಿರುವ ವಾರ್ಷಿಕ ಅನುದಾನವೆಷ್ಟು; ಬಳಕೆಯಾಗಿರುವ ಅನುದಾನವೆಷ್ಟು; (ಪೂರ್ಣ ಮಾಹಿತಿಯನ್ನು ಒದಗಿಸುವುದು) | ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವ್ಯಾಪ್ತಿಯಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರ ಹಾಗೂ ಕುವೆಂಪು ಭಾಷಾ ಭಾರತಿ ಪ್ರಾಧಿಕಾರ ಕಾರ್ಯನಿರ್ವಹಿಸುತ್ತಿವೆ.<br>**ಕನ್ನಡ ಪುಸ್ತಕ ಪ್ರಾಧಿಕಾರ** (table below)<br>**ಕುವೆಂಪು ಭಾಷಾ ಭಾರತಿ ಪ್ರಾಧಿಕಾರ** (table below) |

**ಕನ್ನಡ ಪುಸ್ತಕ ಪ್ರಾಧಿಕಾರ**

| ವರ್ಷ | ಬಿಡುಗಡೆಯಾದ ಅನುದಾನ | ಬಳಕೆಯಾದ ಅನುದಾನ |
|---|---|---|
| 2022-23 | 62,00,000 | 58,75,618 |
| 2023-24 | 71,70,000 | 71,70,000 |
| 2024-25 | 1,54,50,000 | 1,38,00,000 |

**ಕುವೆಂಪು ಭಾಷಾ ಭಾರತಿ ಪ್ರಾಧಿಕಾರ**

| ವರ್ಷ | ಬಿಡುಗಡೆಯಾದ ಅನುದಾನ | ಬಳಕೆಯಾದ ಅನುದಾನ |
|---|---|---|
| | ರೂ.ಲಕ್ಷಗಳಲ್ಲಿ | |
| 2022-23 | 10.00 | 10.00 |
| 2023-24 | 50.00 | 50.00 |
| 2024-25 | 50.00 | 50.00 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಆ. | ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಡಿಯಲ್ಲಿ ಬರುವ ಅಕಾಡೆಮಿಗಳಿಗೆ ಅಧ್ಯಕ್ಷರನ್ನು ಮತ್ತು ಸದಸ್ಯರನ್ನು ನೇಮಿಸಲಾಗಿದೆಯೇ; ಅವರ ಕಾಲಾವಧಿ ಎಷ್ಟು: (ವಿವರಗಳನ್ನು ನೀಡುವುದು) | ಸರ್ಕಾರದ ಅಧಿಸೂಚನೆ ಸಂಖ್ಯೆ: ಕಸಂವಾ 204 ಕಸಧ 2023 ಬೆಂಗಳೂರು ದಿನಾಂಕ:15-03-2024ರಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಲ್ಲಿ ವಿವಿಧ ಅಕಾಡೆಮಿ / ಪ್ರಾಧಿಕಾರಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅಥವಾ ಮುಂದಿನ ಮೂರು ವರ್ಷಗಳ ಅವಧಿಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅಧ್ಯಕ್ಷರು ಮತ್ತು ಸದಸ್ಯರುಗಳನ್ನು ನೇಮಿಸಿ ಆದೇಶಿಸಲಾಗಿದೆ. |
| ಇ. | ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಡಿಯಲ್ಲಿ ಬರುವ ಅಕಾಡೆಮಿಗಳಿಗೆ ಅನುದಾನಗಳನ್ನು/ ಸಹಾಯಧನಗಳನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ, ಯಾವಾಗ ಕಾರ್ಯಗತ ಮಾಡಲಾಗುವುದು: | ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಡಿಯಲ್ಲಿ ಬರುವ ಅಕಾಡೆಮಿಗಳಿಗೆ ಹೆಚ್ಚುವರಿ ಅನುದಾನ ಕೋರಿ ಸ್ವೀಕೃತವಾದ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |
| ಈ. | ಈ ಇಲಾಖೆ ಅಡಿಯಲ್ಲಿ ಬರುವ ಅಕಾಡೆಮಿಗಳ ಎಷ್ಟು ಅಧ್ಯಕ್ಷರಿಗೆ ಸಂಪುಟ ಸಚಿವರ ಸ್ಥಾನಮಾನ ನೀಡಲಾಗಿದೆ. ಉಳಿದ ಅಧ್ಯಕ್ಷರಿಗೆ ಸಂಪುಟ ಸಚಿವ ಸ್ಥಾನ ನೀಡುವ ಪ್ರಸ್ತಾವನೆ ಇದೆಯೇ: | ಇಲಾಖೆ ಅಡಿಯಲ್ಲಿ ಬರುವ ಅಕಾಡೆಮಿಗಳ ಅಧ್ಯಕ್ಷರಿಗೆ ಸಂಪುಟ ಸಚಿವರ ಸ್ಥಾನಮಾನ ನೀಡಲಾಗಿರುವುದಿಲ್ಲ ಹಾಗೂ ಅಕಾಡೆಮಿಯ ಅಧ್ಯಕ್ಷರಿಗೆ ಸಂಪುಟ ದರ್ಜೆ ಸಚಿವ ಸ್ಥಾನಮಾನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಉ. | ಸದರಿ ಇಲಾಖೆ ಅಡಿಯಲ್ಲಿ ಬರುವ ಅಕಾಡೆಮಿಗಳ ಎಲ್ಲಾ ಸದಸ್ಯರಿಗೆ ಗೌರವಧನ ನೀಡಲಾಗುತ್ತಿದೆಯೇ: ಇದನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ? | ಇಲಾಖೆ ಅಡಿಯಲ್ಲಿ ಬರುವ ಅಕಾಡೆಮಿಗಳ ಅಂಗ ರಚನೆಯಲ್ಲಿರುವಂತೆ ಸಭೆ ಸಮಾರಂಭಗಳಿಗೆ ಆಗಮಿಸುವ ಸದಸ್ಯರಿಗೆ ನಿಯಮಾನುಸಾರ ಪ್ರಯಾಣ ಭತ್ಯೆ ಮತ್ತು ಸಭಾ ಭತ್ಯೆಯನ್ನು ನೀಡಲಾಗುತ್ತಿದೆ. ಗೌರವ ಧನ ನೀಡಲಾಗುವುದಿಲ್ಲ. |

ಸಂಖ್ಯೆ: ಕಸಂವಾ 20 ಕವಿಸ 2026

(**ಶಿವರಾಜ ಎಸ್. ತಂಗಡಗಿ**)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು